C.W.3 P.W.2

# ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ. ನ್ಯಾ ದಂಡಾಧಿಕಾರಿಗಳ ನ್ಯಾಯಾಲಯ, ಕುಮಟಾ

## ಸಿ.ಸಿ. ನಂ. 1312/20

ಸಿ.ಡಬ್ಲ್ಯು 3

ಪಿ.ಡಬ್ಲ್ಯು 2

| | | |
|---|---|---|
| ಸಾಕ್ಷಿದಾರರ ಹೆಸರು | – | ಗಣೇಶ ಭಟ್ಟ |
| ತಂದೆಯ ಹೆಸರು | – | ಸರ್ವೇಶ್ವರ ಭಟ್ಟ |
| ವಯಸ್ಸು | – | 51 ವರ್ಷ |
| ಉದ್ಯೋಗ | – | ವ್ಯಾಪಾರ |
| ವಾಸ್ತವ್ಯ | – | ವಕ್ಕನಳ್ಳಿ, ತಾಲೂಕ ಕುಮಟಾ |

(ಇಂದು ದಿನಾಂಕ 07-06-2022 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆ –ಮಾನ್ಯ ಸ.ಸ.ಅ. ರವರಿಂದ**

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿ ಇರುವುದಾಗಿ ಒಪ್ಪಿದ್ದು, ಸದರ ದಾಖಲಾತಿ ಕೃತ್ಯ ಸ್ಥಳದ ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿ.ಪಿ.1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ದಿನಾಂಕ 07-12-2018 ರಂದು ಮಣಕಿ ಮೈದಾನದಲ್ಲಿ ದ್ವಿಚಕ್ರ ವಾಹನ ಕಳುವಾದ ವಿಚಾರದಲ್ಲಿ ಜರುಗಿಸಲಾದ ಪಂಚನಾಮೆಗೆ ಮಾಡಿರುತ್ತೇನೆ. ಪಂಚನಾಮೆಯನ್ನು ಬೆಳಿಗ್ಗೆ 10.00 ರಿಂದ 11.00 ಗಂಟೆಯವರೆಗೆ ಮಾಡಿರಬಹುದು. ಪಂಚನಾಮೆಯ ಸಂದರ್ಭದಲ್ಲಿ ಪೊಲೀಸನವರು ಪೋಟೊವನ್ನು ತೆಗೆದಿರುತ್ತಾರೆ. ಸಾಕ್ಷಿಯು ನೋಡಿ ಗುರುತಿಸಿದ ಪೋಟೊವನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿರುತ್ತದೆ.

**ಪಾಟೀ ಸವಾಲು – ಆರೋಪಿತರ ಪರ ಶ್ರೀ ಪಿ.ಎಸ್.ಎನ್. ವಕೀಲರಿಂದ**

ನಾನು ಪಂಚನಾಮೆಗೆ ಹೋದ ಸಂದರ್ಭದಲ್ಲಿ ಸ್ಥಳದಲ್ಲಿ ಪಂಚನಾಮೆಯಾಗುವವರೆಗೆ ಇದ್ದೆನು. ಸುಮಾರು 5 ರಿಂದ 10 ನಿಮಿಷಗಳ ಅವಧಿಯವರೆಗೆ ಸ್ಥಳದಲ್ಲಿ ಇದ್ದಿರಬಹುದು. ಪಂಚನಾಮೆಯನ್ನು ಹೀಗೆ ಬರೆಯಬೇಕು ಎಂದು ನಾನು ಹೇಳಿ ಬರೆಯಿಸಿರುವುದಿಲ್ಲ. ನಾನು ಸ್ಥಳಕ್ಕೆ ಹೋದ ನಂತರದಲ್ಲಿ ಬರವಣಿಗೆ ಮಾಡಿರುತ್ತಾರೆ. ನಿ.ಪಿ.1 ರಲ್ಲಿ ಏನು ಬರೆಯಲಾಗಿದೆ ಎಂದು ನಿಖರವಾಗಿ ಈಗ ಹೇಳಲು ಆಗುವುದಿಲ್ಲ. ನಾನು ಹಿಂದೂ ಹೋರಾಟಗಾರರ ಪರ ಹೋರಾಟ ಮಾಡಿದವನು ಎಂದರೆ ಸರಿ. ಪೊಲೀಸನವರು ದಾಖಲಿಸಿದ ಸಾಕಷ್ಟು ಪ್ರಕರಣಗಳಲ್ಲಿ ಸಾಕ್ಷ್ಯ ನುಡಿದಿದ್ದೇನೆ ಎಂದರೆ ಸರಿ. ಪೊಲೀಸನವರು ಸಾಮಾನ್ಯವಾಗಿ ನನ್ನನ್ನು ಸಾಕಷ್ಟು ಪ್ರಕರಣಗಳಲ್ಲಿ ಸಾಕ್ಷಿದಾರನನ್ನಾಗಿ ಸೇರ್ಪಡೆ ಮಾಡುತ್ತಾರೆ ಎಂದರೆ ಸರಿಯಲ್ಲ. ಸಾಕಷ್ಟು ಪ್ರಕರಣಗಳಲ್ಲಿ ನಾನು ಆರೋಪಿಯಾಗಿರುತ್ತೇನೆ ಎಂದರೆ ಸಾಕ್ಷಿಯು ಹಿಂದೂಗಳ ಮೇಲೆ ಅನ್ಯಾಯವಾದ ಸಂದರ್ಭದಲ್ಲಿ ಆರೋಪಿ ಆಗಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಹೇಳುವಂತೆ ಸ್ಥಳದಲ್ಲಿ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪೊಲೀಸನವರಿಗೆ ಇತರ ಪ್ರಕರಣಗಳ ಸಾಕ್ಷಿದಾರನಾದ ಕಾರಣ ಸೂಕ್ತ ರೀತಿಯಲ್ಲಿ ಸಾಕ್ಷ್ಯ ನುಡಿಯುತ್ತೇನೆ ಎಂದು ನನ್ನನ್ನು ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ಸಾಕ್ಷಿದಾರರನ್ನಾಗಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಸ್ಥಳಕ್ಕೆ ಹೋಗಿರುವುದಿಲ್ಲ ಹಾಗೂ ಪಂಚನಾಮೆಗೆ ಠಾಣೆಯಲ್ಲಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಪೊಲೀಸನವರು ದಾಖಲಿಸಿದಂತಹ ಸುಳ್ಳು ಪ್ರಕರಣಕ್ಕೆ ಪೂರಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿ.ಪಿ. 2 ಪೋಟೋವನ್ನು ಪಂಚನಾಮೆಯ ಸಂದರ್ಭದಲ್ಲಿ ತೆಗೆದಿರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಪ್ರ.ದ.ನ್ಯಾದಂ. ಕುಮಟಾ